ಸಂಖ್ಯೆ: ಸಿಪಿಸಿ-04/ಪಪ್ರಾಶಾಶಿನೇ/01/2017-18 ದಿನಾಂಕ: 05/11/2018

# ಪ್ರಕಟಣೆ

ಪದವೀಧರ ಪ್ರಾಥಮಿಕ ಶಾಲೆಗಳ ಶಿಕ್ಷಕರ (6-8ನೇ ತರಗತಿ ವೃಂದ) ನೇಮಕಾತಿ ಪ್ರಕ್ರಿಯೆಗೆ ಸಂಬಂಧಿಸಿದಂತೆ 1:1 ಅನುಪಾತದ ತಾತ್ಕಾಲಿಕ ಆಯ್ಕೆ ಪಟ್ಟಿಯನ್ನು ದಿನಾಂಕ: 10/10/2018ರಂದು ಇಲಾಖಾ ವೆಬ್‌ಸೈಟ್‌ನಲ್ಲಿ ಪ್ರಕಟಿಸಲಾಗಿತ್ತು. 1:1 ತಾತ್ಕಾಲಿಕ ಆಯ್ಕೆಪಟ್ಟಿಯಲ್ಲಿ ಎರಡು ರೀತಿಯ ಅಭ್ಯರ್ಥಿಗಳನ್ನು ಗುರುತಿಸಿದೆ.

- 31 ಅಭ್ಯರ್ಥಿಗಳು ಒಂದು ಜಿಲ್ಲೆಯಲ್ಲಿ ಒಂದಕ್ಕಿಂತ ಹೆಚ್ಚು ಹುದ್ದೆಗಳಿಗೆ ಆಯ್ಕೆಯಾಗಿರುತ್ತಾರೆ.
- 469 ಅಭ್ಯರ್ಥಿಗಳು ಒಂದಕ್ಕಿಂತ ಹೆಚ್ಚು ಜಿಲ್ಲೆ ಹಾಗು ಬೇರೆ ಬೇರೆ ಜಿಲ್ಲೆಗಳಲ್ಲಿ ಹೆಚ್ಚು ಹುದ್ದೆಗಳಲ್ಲಿ ಆಯ್ಕೆಯಾಗಿರುತ್ತಾರೆ.

ಸದರಿ ಅಭ್ಯರ್ಥಿಗಳಿಗೆ ಜಿಲ್ಲೆ ಹಾಗೂ ಹುದ್ದೆಗಳ ವಿವರಗಳನ್ನು ಅವಲೋಕಿಸಿ, ಅಭ್ಯರ್ಥಿಗಳ ಆಯ್ಕೆ ಹುದ್ದೆ ಹಾಗೂ ಜಿಲ್ಲೆಗೆ ಸೀಮಿತಗೊಳಿಸಿ ಅವರಿಂದ ಮುಚ್ಚಳಿಕೆಯನ್ನು ಪಡೆದು, ಅಭ್ಯರ್ಥಿಗಳ ಆದ್ಯತೆಯನ್ನು ಪರಿಗಣಿಸಿ, 1:1 ಮುಖ್ಯ ಆಯ್ಕೆಪಟ್ಟಿಯನ್ನು ಪ್ರಕಟಿಸಿದೆ.

ಸದರಿ ಮುಖ್ಯ ಆಯ್ಕೆಪಟ್ಟಿಯಲ್ಲಿ, ಹೊಸದಾಗಿ 123 ಅಭ್ಯರ್ಥಿಗಳು ಒಂದಕ್ಕಿಂತ ಹೆಚ್ಚು ಜಿಲ್ಲೆ ಹಾಗೂ ಬೇರೆ ಬೇರೆ ಜಿಲ್ಲೆಗಳಲ್ಲಿ ಆಯ್ಕೆಯಾಗಿರುವ ಸಂಭವನೀಯತೆ ಇದೆ. ಅಂತಹ ಅಭ್ಯರ್ಥಿಗಳು ಆಯ್ಕೆ ಹುದ್ದೆ ಹಾಗೂ ಜಿಲ್ಲೆಗೆ ಸೀಮಿತಗೊಳಿಸಿ, ಮುಚ್ಚಳಿಕೆಯನ್ನು ಛಾಪಾ ಕಾಗದದಲ್ಲಿ ದಿನಾಂಕ: 12/11/2018 ರೊಳಗಾಗಿ ಖುದ್ದಾಗಿ ಅಥವಾ ನೋಂದಣಿ (ರಿಜಿಸ್ಟರ್) ಅಂಚೆ ಮೂಲಕ ಕೇಂದ್ರೀಕೃತ ದಾಖಲಾತಿ ಘಟಕ, ಕಾವೇರಿ ಭವನದ ಎದುರು, ಕೆ.ಜಿ ರಸ್ತೆ, ಬೆಂಗಳೂರು-09 ಇಲ್ಲಿಗೆ ಕಡ್ಡಾಯವಾಗಿ ತಲುಪಿಸಲು ಸೂಚಿಸಿದೆ.

ಆಯುಕ್ತರು,
ಸಾರ್ವಜನಿಕ ಶಿಕ್ಷಣ ಇಲಾಖೆ